**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**
**<u>ಸಿ.ಸಿ.1607/2023</u>**

| | | |
|---|---|---|
| ಸಾಕ್ಷಿದಾರರ ಹೆಸರು | : ಬಿಳಿಯಪ್ಪ | ಫ್ರಾಸಾ-8 |
| ತಂದೆಯ ಹೆಸರು | : ಗಿಡ್ಡಯ್ಯ | ಚಾಸಾ-8 |
| ವಯಸ್ಸು | : 58 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 16.12.2025 |
| ವಾಸಸ್ಥಳ | : ಬಾಳೂರು | |

**<u>:ಮುಖ್ಯ ವಿಚಾರಣೆ: ಫ್ರಾಜ್ಞ್ಯಾಸ.ಸ.ಅ. ರವರಿಂದ:</u>**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿದೆ. ಅವರು ನನ್ನ ದೂರದ ಸಂಬಂಧಿ. ಚಾಸಾ-7 ನನ್ನ ಮನೆಯ ಪಕ್ಕದ ವಾಸಿ.

ಸಾಕ್ಷಿಯು ನಿಪಿ-19 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ನಿಪಿ-20 ರ ಫೋಟೋದಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-19(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಎಂ.ಒ.1 ನ್ನು ನೋಡಿ ಅದರ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ.

1½ ವರ್ಷದ ಹಿಂದೆ ನಾನು ಕೆಲಸ ಮುಗಿಸಿಕೊಂಡು ಬಾಳೂರು ಪೋಲಿಸ್ ಠಾಣೆಯ ಬಳಿ ಬರುತ್ತಿರುವಾಗ ಪೋಲಿಸರು ನನ್ನ ಸಹಿಗಳನ್ನು ಪಡೆದು, ಫೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನನ್ನ ಸಹಿಯನ್ನು ಪಡೆದು ಫೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಾನು ಸಹಿ ಮಾಡುವ ಕಾಲಕ್ಕೆ ಎಂ.ಒ.1 ರ ವಸ್ತುವನ್ನು ನೋಡಿಲ್ಲ. ನಿಪಿ-19 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-20 ಮತ್ತು 21 ರಲ್ಲಿ ಕಾಣುವ ಸ್ಥಳದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**<u>ಪಾಟೀ ಸವಾಲು: ಫ್ರಾಜ್ಞ್ಯಾಸ.ಸ.ಅ. ರವರಿಂದ:</u>**

ಆರೋಪಿಯು ಚಾಸಾ-2 ರವರಿಗೆ ಹೊಡೆಯಲು ಬೇಲಿಗೆ ಅಳವಡಿಸಿದ್ದ ದೊಣ್ಣೆಯನ್ನು ಇದೇ ಸ್ಥಳದಲ್ಲಿ ತೆಗೆದುಕೊಂಡು ಹೋಗಿರುವುದಾಗಿ ಪೋಲಿಸರು ಮತ್ತು ನಮ್ಮ ಸಮಕ್ಷಮ ಆರೋಪಿಯೇ ಸ್ಥಳ ತೋರಿಸಿದ್ದರು ಎಂದರೆ ಸರಿಯಲ್ಲ. ಈ ವಿಚಾರವಾಗಿ ದಿ.24.01.2023 ರಂದು ಮ.1.00 ರಿಂದ 2.30 ರವರೆಗೂ ನಿಪಿ-19 ರಂತೆ ಮಹಜರ್ ಬರೆದು ಅದೇ ಸಮಯಕ್ಕೆ ನಿಪಿ-20 ಮತ್ತು 21 ರ ಫೋಟೋಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಯನ್ನು ನಮ್ಮ

ಸಂಬಧಿಕರಾದ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.